ಮೇಲ್ದರ್ಜೆಗೇರಿಸಲು ಕಾರ್ಯಕ್ರಮವನ್ನು ರೂಪಿಸಲಾಗಿದೆ.

## ರೋಗಿಗಳ ಸಂಖ್ಯೆಯಲ್ಲಿ ಏರಿಕೆ

ಪ್ರಾಯೋಗಿಕವಾಗಿ ಜಾರಿಗೊಳಿಸಲಾಗಿದ್ದ ಎರಡು ತಾಲ್ಲೂಕುಗಳಲ್ಲಿ ಕಾರ್ಯಕ್ರಮದ 9 ತಿಂಗಳ ಅಲ್ಪಾವಧಿ ಸೇವೆಗಳನ್ನು ಪರಿಶೀಲಿಸಿದಾಗ ಹೊರರೋಗಿಗಳ ಸಂಖ್ಯೆಯಲ್ಲಿ ಗಣನೀಯ ಏರಿಕೆಯಾಗಿರುವುದು ಕಂಡುಬಂದಿದೆ. ಈಗ ಪ್ರತಿದಿನ 18 ರೋಗಿಗಳು ಉಪಕೇಂದ್ರ ಮಟ್ಟದ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಸೇವೆಗಳನ್ನು ಪಡೆಯುತ್ತಿದ್ದಾರೆ. ಈ ಉಪಕೇಂದ್ರಗಳ ವ್ಯಾಪ್ತಿಯಲ್ಲಿ 6.5 ಲಕ್ಷ ಜನತೆಯನ್ನು ಸಾಂಕ್ರಾಮಿಕವಲ್ಲದ ರೋಗಗಳಿಗೆ ತಪಾಸಣೆ ನಡೆಸಲಾಗಿದೆ. ಮಧುಮೇಹ ಹಾಗೂ ರಕ್ತದೊತ್ತಡದ ರೋಗಿಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ತಾಲ್ಲೂಕು ಆಸ್ಪತ್ರೆಗಳಿಂದ ಶಿಫಾರಸ್ಸು ಮಾಡಲ್ಪಟ್ಟ ಔಷಧಿಗಳನ್ನು ಆರೋಗ್ಯ ಕ್ಷೇಮ ಕೇಂದ್ರಗಳಿಂದ ಸ್ಥಳೀಯವಾಗಿ ಪಡೆಯುವ ಅವಕಾಶ ದೊರೆತಿದೆ. ಉಚಿತವಾಗಿ ಔಷಧಿಗಳು ದೊರೆಯುತ್ತಿದ್ದು, ಅನವಶ್ಯಕ ಅಲೆದಾಟವೂ ತಪ್ಪಿದೆ.

## ಸಾಂಕ್ರಾಮಿಕ ರೋಗಗಳ ನಿಯಂತ್ರಣ

ಸಾಂಕ್ರಾಮಿಕ ರೋಗಗಳು ಕೇವಲ ಒಬ್ಬ ವ್ಯಕ್ತಿಗೆ ಮಾತ್ರವಲ್ಲದೆ ಇಡೀ ಸಮುದಾಯವನ್ನೇ ಪೀಡಿಸಬಲ್ಲದು. ಹಾಗಾಗಿ ಇವುಗಳ ಬಗ್ಗೆ ಜಾಗೃತಿ ಮೂಡಿಸುವುದು ಅತ್ಯವಶ್ಯಕ. ಆರಂಭದ ಹಂತದಲ್ಲೇ ಅವುಗಳನ್ನು ಪತ್ತೆ ಮಾಡುವುದರಿಂದ, ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವುದರಿಂದ, ಪೌಷ್ಟಿಕ ಆಹಾರ ಮತ್ತು ನೈರ್ಮಲ್ಯ ಅಭ್ಯಾಸಗಳನ್ನು ರೂಢಿಸಿಕೊಳ್ಳುವುದರಿಂದ ಸಾಂಕ್ರಾಮಿಕ ರೋಗಗಳನ್ನು ಹದ್ದುಬಸ್ತಿನಲ್ಲಿಡಬಹುದು. ಆರೋಗ್ಯ ಮತ್ತು ಕ್ಷೇಮದ ಪ್ರಮುಖ ಉದ್ದೇಶಗಳಲ್ಲಿ ಇದು ಒಂದಾಗಿದೆ. ಕಾಲರಾ, ಎಚ್1ಎನ್1, ಮಂಗನ ಬಾವು, ವಿಷಮಶೀತ ಜ್ವರ, ನಾಯಿಕೆಮ್ಮು, ಪೋಲಿಯೊ, ಡಿಫ್ತೀರಿಯಾ ಸೇರಿದಂತೆ ವಿವಿಧ ಸಾಂಕ್ರಾಮಿಕ ರೋಗಗಳು ಹರಡದಂತೆ ತಡೆಗಟ್ಟಬಹುದು.

## ಸಾಂಕ್ರಾಮಿಕವಲ್ಲದ ರೋಗಗಳು

ಬದಲಾದ ಜೀವನ ಶೈಲಿಯಿಂದ ಗ್ರಾಮೀಣ ಭಾಗದಲ್ಲೂ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಕ್ಯಾನ್ಸರ್ ಇನ್ನಿತರ ಕಾಯಿಲೆಗಳು ಹೆಚ್ಚುತ್ತಿವೆ. ಈ ಬಗ್ಗೆ ಕೇಂದ್ರಗಳು ಅರಿವು ಮೂಡಿಸಲಿವೆ. ವಿಶ್ವದಲ್ಲಿ ಶೇ 63 ರಷ್ಟು ಮಂದಿ ಅಸಾಂಕ್ರಾಮಿಕ ರೋಗಗಳಿಂದ ಸಾಯುತ್ತಿದ್ದಾರೆ ಎಂದು ಸಂಶೋಧನೆ ದೃಢಪಡಿಸಿದೆ. ಮಧುಮೇಹ, ಅಧಿಕ ರಕ್ತದೊತ್ತಡ, ಹೃದಯ ತೊಂದರೆಗಳು, ಕೊಲೆಸ್ಟ್ರಾಲ್ ಸಮಸ್ಯೆಗಳು, ಶ್ವಾಸಕೋಶ ಸಮಸ್ಯೆ, ಒಸ್ಟಿಯೋ ಆರ್ಥೈಟಿಸ್, ಪಿತ್ತಜನಕಾಂಗದ ತೊಂದರೆಗಳು




